## ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 158 ಟಿಎನ್‌ಆರ್ 2020 (2)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03-05-2021.

### ಆದೇಶ

ರಾಜ್ಯದಲ್ಲಿ ಕೋವಿಡ್-19 ಸೋಂಕು ಪ್ರಸರಣ ಉಲ್ಬಣವಾಗಿದೆ. ರಾಜ್ಯ ಸರ್ಕಾರವು ಕೋವಿಡ್-19 ಸೋಂಕು ಪ್ರಸರಣವನ್ನು ತಡೆಗಟ್ಟಲು ಸಮರೋಪಾದಿಯಲ್ಲಿ ಎಲ್ಲಾ ಅತ್ಯಾವಶ್ಯಕ ಕ್ರಮಗಳನ್ನು ಕೈಗೊಂಡಿದೆ. ಆದಾಗ್ಯೂ ಕೋವಿಡ್-19 ಸೋಂಕಿನಿಂದ ಸಾವು-ನೋವುಗಳು ಸಂಭವಿಸುತ್ತಿದ್ದು, ಇಂತಹ ಸಂದರ್ಭದಲ್ಲಿ ತಂದೆ-ತಾಯಿಯನ್ನು / ಪೋಷಕರನ್ನು ಕಳೆದುಕೊಂಡಂತಹ ಮಕ್ಕಳಿಗೆ ಅಗತ್ಯ ಸೌಕರ್ಯಗಳನ್ನು ಒದಗಿಸುವುದು ಅವಶ್ಯಕವಾಗಿರುತ್ತದೆ.

ಆದ್ದರಿಂದ, ಕೋವಿಡ್-19 ಸೋಂಕಿನಿಂದ ಪೋಷಕರನ್ನು ಕಳೆದುಕೊಂಡು ಅನಾಥರಾದ ಮಕ್ಕಳಿಗೆ ಸರ್ಕಾರದಿಂದ ಅತ್ಯಾವಶ್ಯಕ ಸೌಕರ್ಯಗಳನ್ನು ಆಧ್ಯತೆಯ ಆಧಾರದ ಮೇಲೆ ಒದಗಿಸುವ ಸಲುವಾಗಿ ಅಗತ್ಯ ಕ್ರಮವಹಿಸಲು **ಶ್ರೀ ಕೆ.ಪಿ. ಮೋಹನ್‌ರಾಜ್, ಭಾ.ಆ.ಸೇ., ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕ ಆಯುಕ್ತರು,** ಇವರನ್ನು ರಾಜ್ಯ ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ. ಈ ಅಧಿಕಾರಿಯು ತಕ್ಷಣವೇ ಕಾರ್ಯ ಪ್ರವೃತ್ತರಾಗಿ ಕರ್ತವ್ಯವನ್ನು ವಹಿಸಿಕೊಳ್ಳತಕ್ಕದ್ದು.

ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳು ಈ ಕುರಿತು ಅಗತ್ಯ ಕ್ರಮವಹಿಸತಕ್ಕದ್ದು ಮತ್ತು ಅಂತಹವರ ಪೋಷಣೆಗಾಗಿ ದೀರ್ಘಾವಧಿ ಸಹಕಾರ ನೀಡತಕ್ಕದ್ದು.

ಈ ಆದೇಶವನ್ನು ವಿಪತ್ತು ನಿರ್ವಹಣೆ ಕಾಯ್ದೆ, 2005 ರಲ್ಲಿನ ಸೆಕ್ಷನ್ 24 (ಇ) ಮತ್ತು (ಎಲ್)ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರ ನಿರ್ದೇಶನದಂತೆ, ಹೊರಡಿಸಲಾಗಿದೆ.

**(ಎನ್. ಮಂಜುನಾಥ ಪ್ರಸಾದ್, ಭಾ.ಆ.ಸೇ.,)** 3/5/2021
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.